# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1267 (1490)

ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 18-12-2025.

ಉತ್ತರಿಸುವ ಸಚಿವರು : ಸನ್ಮಾನ್ಯ ಮುಖ್ಯಮಂತ್ರಿಗಳು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ನವೆಂಬರ್ 27 ರಂದು ಮಾನ್ಯ ಉಚ್ಚ ನ್ಯಾಯಾಲಯವು ಆದೇಶಿಸಿದಂತೆ 56% ಮೀಸಲಾತಿ ಪ್ರಕರಣವು ಇತ್ಯರ್ಥವಾಗುವವರೆಗೂ ಯಾವುದೇ ಹೊಸ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸುವಂತಿಲ್ಲ ಎಂದು ತಿಳಿಸಿರುವುದರಿಂದ ಸರ್ಕಾರಿ ಹುದ್ದೆ ಪಡೆಯಬೇಕೆಂದು ಸ್ಪರ್ಧಾತ್ಮಕ ಪರೀಕ್ಷೆಗಾಗಿ ಓದುತ್ತಿರುವ ರಾಜ್ಯದ ಲಕ್ಷಾಂತರ ಗ್ರಾಮೀಣ ಹಾಗೂ ಬಡ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಸದ್ಯಕ್ಕೆ ಯಾವ ರೀತಿಯ ಪರಿಹಾರ ಕ್ರಮವನ್ನು ಕೈಗೊಳ್ಳಲಾಗುತ್ತದೆ.</td><td rowspan="4">ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿರುವ ಕಾರಣ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448/2025 ರಲ್ಲಿ ದಿನಾಂಕ:27-11-2025 ರಂದು ಈ ಕೆಳಕಂಡಂತೆ ಆದೇಶ ಮಾಡಿ, ಮುಂದಿನ ವಿಚಾರಣೆಯನ್ನು ದಿನಾಂಕ: 22-01-2026 ಕ್ಕೆ ನಿಗಧಿಪಡಿಸಲಾಗಿರುತ್ತದೆ.<br><br>" we consider it apposite to modify our order dated 19-11-2025 to direct that no further notifications for recruitment or appointment on the basis of increased reservation would be issued till the disposal of the present petitions. The recruitment pursuant to the process that is already begun may be continued. However, any appointment made shall be subject to the final outcome of present petitions'.<br><br>ಸದರಿ ಆದೇಶದಂತೆ ದಿನಾಂಕ: 27-11-2025 ರ ಮುಂಚೆ ನೇಮಕಾತಿಗಾಗಿ ಹೊರಡಿಸಲಾಗಿರುವ ಅಧಿಸೂಚನೆಗಳಂತೆ ನೇಮಕಾತಿ ಪ್ರಕ್ರಿಯೆ ಮುಂದುವರೆಯುತ್ತದೆ. ನೇಮಕಾತಿ ಆದೇಶ ನೀಡುವ ಸಮಯದಲ್ಲಿ ನ್ಯಾಯಾಲಯದ ಆದೇಶದಂತೆ ನೇಮಕಾತಿ ಆದೇಶದಲ್ಲಿ ಅಂತಿಮ ತೀರ್ಪಿಗೆ ಒಳಪಟ್ಟು ಎಂಬ ಷರತ್ತು ವಿಧಿಸಿ ನೇಮಕಾತಿ ಆದೇಶ ನೀಡಲಾಗುವುದು.<br><br>ಮಾನ್ಯ ಉಚ್ಚ ನ್ಯಾಯಾಲಯ ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಬಾರದೆಂದು ಆದೇಶ</td></tr>
<tr><td>ಆ)</td><td>ಇದರಿಂದ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗಿ ವಿವಿಧ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆಯುಂಟಾಗಿ ನೇರವಾಗಿ ಸರ್ಕಾರದ ಆಡಳಿತದ ಮೇಲೆ ಪರಿಣಾಮ ಬೀರುವುದಿಲ್ಲವೇ;</td></tr>
<tr><td>ಇ)</td><td>ನೇಮಕಾತಿಗಳನ್ನು ಶೀಘ್ರ ಗತಿಯಲ್ಲಿ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ;</td></tr>
<tr><td>ಈ)</td><td>ಚಾಲ್ತಿಯಲ್ಲಿರುವ ನೇಮಕಾತಿಗಳಿಗನುಗುಣವಾಗಿ ನ್ಯಾಯಾಲಯವು 56% ಮೀಸಲಾತಿಗೆ ಕಾನೂನಿನ ಮಾನ್ಯತೆ ಇಲ್ಲವೆಂದು ತೀರ್ಪು ನೀಡಿದರೆ, ಉಳಿದ 6% ಮೀಸಲಾತಿಯಲ್ಲಿನ ಅಭ್ಯರ್ಥಿಗಳಿಗೆ ಅನ್ಯಾಯವಾಗುವುದಿಲ್ಲವೇ; ಈ ಬಗ್ಗೆ ಕಾನೂನಾತ್ಮಕವಾಗಿ ಕ್ರಮ</td></tr>
</table>

| | | |
|---|---|---|
| | ಕೈಗೊಳ್ಳಬಹುದಲ್ಲವೇ; ಆಯ್ಕೆಯಾಗುವ ಮತ್ತು ಮೀಸಲಾತಿಯಿಂದ ಹೊರಗುಳಿಯುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲಿದೆ; (ವಿವರ ನೀಡುವುದು) | ಮಾಡಿರುತ್ತದೆ. ಈ ಬಗ್ಗೆ ಈಗಾಗಲೇ ದಿನಾಂಕ:11-12-2025 ರಂದು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮತ್ತು 371(ಜೆ) ಪ್ರಕಾರ ಕಲ್ಯಾಣ ಕರ್ನಾಟಕದಲ್ಲಿ ಮತ್ತು ಬ್ಯಾಕಲಾಗ್ ಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಆಡಳಿತಾತ್ಮಕ ಹಿತದೃಷ್ಟಿಯಿಂದ ಭರ್ತಿ ಮಾಡಲು ಮೇಲ್ಕಂಡ ಆದೇಶವನ್ನು ಮಾರ್ಪಡಿಸಿ ಹೊಸದಾಗಿ ನೇಮಕಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಲು ಅನುಮತಿ ಕೋರಿ Interolocutary Application ನ್ನು ಸಲ್ಲಿಸಲಾಗಿದೆ. ಎಲ್ಲಾ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಸದರಿ ಅರ್ಜಿಯನ್ನು ಸಲ್ಲಿಸಲಾಗಿದೆ.<br><br>ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯನ್ನು ಒಂದು ಬಾರಿಗೆ ಮೂರು ವರ್ಷವರೆಗೆ ಸಡಿಲಿಸಿ ಸರ್ಕಾರದ ಆದೇಶ ಸಂಖ್ಯೆ: 262 ಸೆನೆನಿ 2025 ದಿನಾಂಕ:29.09.2025 ನ್ನು ಹೊರಡಿಸಲಾಗಿರುತ್ತದೆ. |

**No: SWD/733/SLP/2025**

(**ಡಾ||ಹೆಚ್.ಸಿ.ಮಹದೇವಪ್ಪ**)
ಸಮಾಜ ಕಲ್ಯಾಣ ಸಚಿವರು.